## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳನ್ನು ಆನ್‌ಲೈನ್ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಯುಸೇಇ 214 ಯುಸೇಕ್ರೀ 2016, ದಿನಾಂಕ:18.05.2016
2. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ:ಯುಸಕ್ರೀಇ/ಯುನಿ/ಯುಸ್ಪ/13/2016-17, ದಿನಾಂಕ::18.05.2016.

******

**ಪ್ರಸ್ತಾವನೆ:**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಕ್ರೀಡಾ ವಿದ್ಯಾರ್ಥಿ ವೇತನ, ಶೈಕ್ಷಣಿಕ ಶುಲ್ಕ ಮರುಪಾವತಿ, ಯುವ ಕ್ರೀಡಾ ಸಂಜೀವಿನಿ, ಕ್ರೀಡಾ ಪ್ರಶಸ್ತಿಗಳು, ಯುವ ಪ್ರಶಸ್ತಿಗಳು, ಕ್ರೀಡಾಕೂಟದ ನೊಂದಣಿ, ಕ್ರೀಡಾ ಸಂಸ್ಥೆಗಳ ನೊಂದಣಿ, ತರಬೇತಿ ಕಾರ್ಯಕ್ರಮಗಳಿಗೆ ನೊಂದಣಿ ನಗದು ಪ್ರೋತ್ಸಾಹಕಗಳು, ಬಹುಮಾನಗಳು ಮತ್ತಿತರ ಫಲಾನುಭವಿ ಆಧಾರಿತ ಎಲ್ಲಾ ಕಾರ್ಯಕ್ರಮಗಳು/ಯೋಜನೆಗಳನ್ನು ಆನ್‌ಲೈನ್ ಮಾಡುವ ಮೂಲಕ ಅವುಗಳನ್ನು ನಾಗರಿಕ ಸ್ನೇಹಿ ಯೋಜನೆಗಳನ್ನಾಗಿ ಅನುಷ್ಠಾನಗೊಳಿಸಲು ಹಾಗೂ ಸದರಿ ಪ್ರಕ್ರಿಯೆಯನ್ನು ರಾಜ್ಯ ಸರ್ಕಾರದ ಅಧೀನ ಸಂಸ್ಥೆಯಾದ ಮೆ: ಕಿಯೋನಿಕ್ಸ್ ಸಂಸ್ಥೆಯ ಮೂಲಕ ರೂ. 60.00 ಲಕ್ಷ ವೆಚ್ಚದಲ್ಲಿ ನಿರ್ವಹಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಮೇಲೆ ಓದಲಾದ (1)ರ ಆದೇಶ ಹೊರಡಿಸಲಾಗಿದೆ.

ಇಲಾಖೆಯ ವಿವಿಧ ಕಾರ್ಯಕ್ರಮಗಳನ್ನು ಗಣಕೀಕರಣ ಮಾಡಲು 25 ವಿಷಯ (Online Scholarships & Awards computerization, Students Welfare Scheme, Maintenance of Sports Hostels, Web-based Bio-metric Attendance system, Salaries of coaches & Teachers of Sports Hostel, Stadium Management & Bookings, Monotoring of works & Preparation of Estimates, Computerization of women & Rural Sports etc.) ಗಳಿಗೆ ಸಂಬಂಧಿಸಿದಂತೆ ತಂತ್ರಾಂಶಗಳನ್ನು ಅಭಿವೃದ್ಧಿ ಪಡಿಸಿ ನಿರ್ವಹಿಸಲು ನ್ಯಾಷನಲ್ ಇನ್ಫೋರ್ಮೆಟಿಕ್ ಸೆಂಟರ್ ಸರ್ವಿಸಸ್ ಇಂಕ್, ಬೆಂಗಳೂರು ಇವರು ಒಂದು ವರ್ಷಕ್ಕೆ ರೂ.14.54 ಲಕ್ಷ ಬಾಬ್ತನ್ನು ಪಾವತಿಸುವಂತೆ ಡೆಪ್ಯೂಟಿ ಡೈರೆಕ್ಟರ್ ಜನರಲ್ ಮತ್ತು ರಾಜ್ಯ ಇನ್ಫೋರ್ಮೆಟಿಕ್ ಅಧಿಕಾರಿ, ನ್ಯಾಷನಲ್ ಇನ್ಫೋರ್ಮೆಟಿಕ್ ಸೆಂಟರ್ ಇವರು ಕೋರಿದ್ದು, ಅದರಂತೆ ಇಲಾಖೆಯ ಯೋಜನೆಗಳನ್ನು ಆನ್‌ಲೈನ್ ಮಾಡಲು ನ್ಯಾಷನಲ್ ಇನ್ಫೋರ್ಮೆಟಿಕ್ ಸೆಂಟರ್ ಸರ್ವಿಸಸ್ ಇಂಕ್, ಬೆಂಗಳೂರು ಇವರಿಗೆ ರೂ.14.54 ಲಕ್ಷಗಳನ್ನು ಪಾವತಿಸಲು ಹಾಗೂ ಈ ವೆಚ್ಚವನ್ನು ಲೆಕ್ಕಶೀರ್ಷಿಕೆ 2204-00-104-0-02 059 ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸಲೆನ್ಸ್ ಅಡಿಯಲ್ಲಿ ಭರಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ಮೇಲೆ ಓದಲಾದ (2)ರ ಪತ್ರದಲ್ಲಿ ಸರ್ಕಾರವನ್ನು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಮೇಲೆ ಓದಲಾದ (1)ರ ಆದೇಶವನ್ನು ಮಾರ್ಪಡಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 214 ಯುಸೇಕ್ರೀ 2016,**

**ಬೆಂಗಳೂರು, ದಿನಾಂಕ: 26.10.2016**

ಇಲಾಖೆಯ ವಿವಿಧ ಕಾರ್ಯಕ್ರಮಗಳನ್ನು ಗಣಕೀಕರಣ ಮಾಡಲು 25 ವಿಷಯ (Online Scholarships & Awards computerization, Students Welfare Scheme, Maintenance of Sports Hostels, Web-based Bio-metric Attendance system, Salaries of coaches & Teachers of Sports Hostel, Stadium Management & Bookings, Monotoring of works & Preparation of Estimates, Computerization of women & Rural Sports etc.) ಗಳಿಗೆ ಸಂಬಂಧಿಸಿದಂತೆ ತಂತ್ರಾಂಶಗಳನ್ನು ಅಭಿವೃದ್ಧಿ ಪಡಿಸಿ ಒಂದು ವರ್ಷದ ಅವಧಿಗೆ ನಿರ್ವಹಿಸಲು ನ್ಯಾಷನಲ್ ಇನ್ಫೋರ್ಮೆಟಿಕ್ ಸೆಂಟರ್ ಸರ್ವಿಸಸ್ ಇಂಕ್, ಬೆಂಗಳೂರು, ಇವರಿಗೆ ರೂ.14.54 ಲಕ್ಷಗಳನ್ನು ಪಾವತಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಸದರಿ ವೆಚ್ಚವನ್ನು ಲೆಕ್ಕಶೀರ್ಷಿಕೆ 2204-00-104-0-02-059 ಕರ್ನಾಟಕ ಸ್ಪೋರ್ಟ್ಸ್ ಅಕಾಡೆಮಿ ಫಾರ್ ಎಕ್ಸಲೆನ್ಸ್ ಅಡಿಯಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2015, ದಿನಾಂಕ: 09.04.2015ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಆರ್. ಪ್ರಭುಶಂಕರ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

**ಗೆ:**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಪಿ. ಬಿ. ನಂ. 5329, ಬೆಂಗಳೂರು.
2. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ನಿರ್ದೇಶಕರು, ಯೋಜನಾ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-7/8), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
7. ಮಾನ್ಯ ಯುವಜನ ಸೇವಾ ಮತ್ತು ಮೀನುಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
10. ಸರ್ಕಾರದ ಉಪ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಆಪ್ತ ಸಹಾಯಕರು.
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.